ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮುಖ್ಯ ಅಭಿಯಂತರರವರ ಕಛೇರಿ, ರಾಜರಾಜೇಶ್ವರಿನಗರ ವಲಯ, ಬೆಂಗಳೂರು-98

ಸಂಖ್ಯೆ.ಮುಅ/ರಾ.ರಾ.ನ/ತಾ.ಮಂ/546/2016-17 ದಿನಾಂಕ: 3/3/2017.

ತಾಂತ್ರಿಕ ಮಂಜೂರಾತಿ

ವಿಷಯ: Modified Estimate for the work for Development of Play ground at ward No.17 J.P.Park

ಉಲ್ಲೇಖ: 1)ಮುಖ್ಯ ಅಭಿಯಂತರರು (ಕೆರೆಗಳು) ಬಿಬಿಎಂಪಿ ರವರ ತಾಂತ್ರಿಕ ಮಂಜೂರಾತಿ ಜ್ಞಾಪನ ಪತ್ರ ಸಂಖ್ಯೆ:ಮು.ಅ(ಕೆರೆಗಳು)/ತಾ.ಮಂ/29/2012-13 ದಿನಾಂಕ: 20.12.2012

2)ಜಾಬ್ ಕೋಡ್ ಸಂಖ್ಯೆ: 017-12-000058 ಪಿ-2375 Development of Play ground at ward No.17 JP Park.

****

ಮೇಲಿನ ವಿಷಯದಲ್ಲಿ ತಿಳಿಸಿರುವ ಕಾಮಗಾರಿಗೆ ಕಾರ್ಯಪಾಲಕ ಅಭಿಯಂತರರು ರಾ.ರಾ.ನಗರ ವಿಭಾಗ ರವರು ಮಾರ್ಪಡಿತ ಅಂದಾಜು ಪಟ್ಟಿಗೆ ತಾಂತ್ರಿಕ ಮಂಜೂರಾತಿಯನ್ನು ಕೋರಿರುವ ಮೇರೆಗೆ, ಮಾನ್ಯ ಆಯುಕ್ತರು ನಿಯೋಜಿಸಿರುವ ಅಧಿಕಾರ ಪ್ರತ್ಯಾಯೋಜನೆ ಆದೇಶ ಸಂ: ಬಿ12(1)ಪಿ.ಆರ್/394/2016-17 ದಿನಾಂಕ:05.05.2016 ರಂತೆ ಸದರಿ ಕಾಮಗಾರಿಗೆ ರೂ. 1,07,59,017.41/- (**ರೂ ಒಂದು ಕೋಟಿ ಏಳು ಲಕ್ಷದ ಐವತ್ತೊಂಭತ್ತು ಸಾವಿರದ ಹದಿನೇಳು ರೂಪಾಯಿ ನಲವತ್ತೊಂದು ಪೈಸೆ ಮಾತ್ರ**) ಗಳಿಗೆ ಉಲ್ಲೇಖ (1) ರ ತಾಂತ್ರಿಕ ಮಂಜೂರಾತಿಯನ್ನು ರದ್ದುಪಡಿಸಿ, ಮಾರ್ಪಾಡು ತಾಂತ್ರಿಕ ಮಂಜೂರಾತಿಯನ್ನು ತಾಂತ್ರಿಕ ಮಂಜೂರಾತಿಯ ಪುಸ್ತಕದ ಪುಟ ಸಂಖ್ಯೆ **126-127** ರ ಕ್ರಮ ಸಂಖ್ಯೆ **546** ರಲ್ಲಿ ದಾಖಲಿಸಿ ಈ ಕೆಳಗಿನ ಷರತ್ತುಗೊಳಪಟ್ಟಂತೆ ಅನುಮೋದನೆ ನೀಡಲಾಗಿದೆ.

ಷರತ್ತುಗಳು

1. ಮಾನ್ಯ ಆಯುಕ್ತರವರ ಕಛೇರಿ ಸುತ್ತೋಲೆ ಸಂಖ್ಯೆ : ಆಯುಕ್ತರು/ಪಿಆರ್/176/15--16 ದಿನಾಂಕ: 22.12.2015 ರ ಆದೇಶದ ಮೇರೆಗೆ ಸದರಿ ಕಾಮಗಾರಿಯನ್ನು ಇನ್ಯಾವುದೆ ಅನುದಾನದ ಯೋಜನೆಯಲ್ಲಿ ಕೈಗೆತ್ತಿಕೊಂಡಿರುವುದಿಲ್ಲವೆಂದು ಅಥವಾ ಕಾಮಗಾರಿಗಳು ಪುನಾರವರ್ತಿತವಾಗಿಲ್ಲವೆಂದು ಹಾಗೂ ಈಗಾಗಲೇ ಚಾಲ್ತಿಯಲ್ಲಿರುವ/ಪೂರ್ಣಗೊಂಡಿರುವ ಕಾಮಗಾರಿಗಳು ಅಥವಾ ಲೋಕಾಯುಕ್ತ / ಯಾವುದೇ ಇಲಾಖಾ ವಿಚಾರಣೆ ಹಂತದಲ್ಲಿರುವ ಕಾಮಗಾರಿಗಳು ಸದರಿ ಕ್ರಿಯಾಯೋಜನೆಯಲ್ಲಿ ಸೇರ್ಪಡೆಮಾಡಿರುವುದಿಲ್ಲವೆಂದು ಅಥವಾ ಪುನರಾವರ್ತಿತವಾಗಿಲ್ಲವೆಂದು, ಟೆಂಡರ್ ಪ್ರಕ್ರಿಯೆ ಪ್ರಾರಂಭವಾಗುವ ಪೂರ್ವದಲ್ಲೇ ಸಂಬಂಧಪಟ್ಟ ಕಾ.ಪಾ.ಅ/ಸ.ಕಾ.ಪಾ.ಅ/ವಾರ್ಡ್ ಅಭಿಯಂತರವರು ಸ್ಥಳ ಪರಿಶೀಲಿಸಿ ದೃಢೀಕರಿಸಿ, ಖಚಿತಪಡಿಸಿಕೊಂಡ ನಂತರವಷ್ಟೆ ಸದರಿ ಕಾಮಗಾರಿಯನ್ನು ಅನುಷ್ಠಾನಗೊಳಿಸುವ ಷರತ್ತಿಗೊಳಪಡಿಸಿದೆ.
2. ಈಗ ತಾಂತ್ರಿಕ ಮಂಜೂರಾತಿ ನೀಡಲಾಗಿರುವ ಯಾವುದೇ ಕಾಮಗಾರಿ ಬೇರೆ ಯಾವುದೇ ಇಲಾಖೆ ಅಥವಾ ಯೋಜನೆಯಡಿ ಸೇರಿಸಿ ಅನುಷ್ಠಾನಗೊಳಿಸಿದ್ದಲ್ಲಿ ಆ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವಂತಿಲ್ಲ.
3. ಪ್ರತಿ ಕಾಮಗಾರಿಯ ಪ್ರಾರಂಭಕ್ಕೆ ಮುನ್ನಾ ಛಾಯಾ ಚಿತ್ರವನ್ನು ತೆಗೆದು ಈ ಕಛೇರಿಗೆ ಹಾಜರ್ ಪಡಿಸತಕ್ಕದ್ದು ಹಾಗೂ ಕಾಮಗಾರಿ ಪ್ರಗತಿಯಲ್ಲಿರುವಾಗ ಮತ್ತು ಪೂರ್ಣಗೊಂಡ ನಂತರ ಪುನಃ ಛಾಯಾ ಚಿತ್ರ ತೆಗೆದು ಪರಿಶೀಲನೆ ಸಮಯದಲ್ಲಿ ಈ ಛಾಯಾ ಚಿತ್ರಗಳನ್ನು ಹಾಜರುಪಡಿಸತಕ್ಕದ್ದು/ಕಡತದಲ್ಲಿ ಇರಿಸತಕ್ಕದ್ದು.
4. ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೇಟಾ ದರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
5. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕ ಅಧಿನಿಯಮ-1999 ಮತ್ತು ನಿಯಮ-2000 ಹಾಗೂ ಸರ್ಕಾರ ನಿಗಧಿಪಡಿಸಿರುವ **Standard Bidding Documents** ಅನ್ನು ಅಳವಡಿಸಿಕೊಂಡು ನಿರ್ವಹಿಸುವುದು.
6. ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡ ನಂತರ ಸಕ್ಷಮ ಪ್ರಾಧಿಕಾರದಿಂದ ಟೆಂಡರ್ ಅನುಮೋದನೆ ಪಡೆಯುವುದು.
7. ಇಡಿಗಂಟು (**Lumpsum/Miscellaneous Amt**) ವೆಚ್ಚದ ಸಮಯದಲ್ಲಿ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯುವುದು.
8. ಸಕ್ಷಮ ಪ್ರಾಧಿಕಾರದಿಂದ ಕರಡು ಟೆಂಡರ್ ಪ್ರತಿಯನ್ನು ಅನುಮೋದನೆ ಪಡೆಯುವುದ .
9. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
10. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೋಟೇಷನ್ ಕರೆದು ಅನುಮೋದನೆ ಪಡೆಯುವುದು.
11. ರಸ್ತೆ ಇತಿಹಾಸ ಪುಸ್ತಕದಲ್ಲಿ ಕಾಮಗಾರಿಯ ಕೆಲಸಗಳಾದ ಚಿಪ್‌ಕಾರ್ಪೆಟಿಂಗ್, ಜೆಲ್ಲಿ[illegible], ಡಾಂಬರೀಕರಣದ ಕೆಲಸವನ್ನು ನಮೂದಿಸುವುದು.
12. ರಸ್ತೆಗೆ ಬಿ.ಎಂ/ ಡಿ.ಬಿ.ಎಂ ಹಾಕಿದ್ದಲ್ಲಿ **Benkelman Beam Deflection report** ನ್ನು ಕಡ್ಡಾಯವಾಗಿ ಸಲ್ಲಿಸಲು ಸೂಚಿಸಿದೆ.

ಮುಖ್ಯ ಅಭಿಯಂತರರು
ರಾಜರಾಜೇಶ್ವರಿ ನಗರ ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1)ಕಾರ್ಯಪಾಲಕ ಅಭಿಯಂತರರು (ಗುಣ ನಿಯಂತ್ರಣ) ವಿಭಾಗ ರವರ ಮಾಹಿತಿಗಾಗಿ.

2)ಕಾರ್ಯಪಾಲಕ ಅಭಿಯಂತರರು, ರಾ.ರಾ.ನಗರ ವಿಭಾಗ ರವರ ಮಾಹಿತಿಗಾಗಿ.

Scanned by CamScanner